**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅ. ದೇವೇಗೌಡ, ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ**

ರಾಜ್ಯದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸುಮಾರು 16,000 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ, ಇದೇ ರೀತಿಯಲ್ಲಿ ಅತಿಥಿ ಉಪನ್ಯಾಸಕರು ಕೆಲಸ ಮಾಡುತ್ತಿರುವ ದೆಹಲಿ, ಹರಿಯಾಣ ರಾಜ್ಯಗಳಲ್ಲಿ ವಿಶೇಷ ನಿಯಮಾವಳಿ ರಚಿಸಿ ಅವರ ಸೇವೆಯನ್ನು ಖಾಯಂಗೊಳಿಸಿರುವಂತೆ ನಮ್ಮ ರಾಜ್ಯದಲ್ಲಿ ಅವರುಗಳ ಸೇವೆಯನ್ನು, ಅವರ ಶಿಕ್ಷಣ ಹಾಗೂ ವಿದ್ಯಾರ್ಹತೆಗಳ ಆಧಾರದ ಮೇಲೆ ಅವರುಗಳ ಭವಿಷ್ಯದ ಹಿತದೃಷ್ಠಿಯಿಂದ ಖಾಯಂಗೊಳಿಸುವ ಬಗ್ಗೆ.

**ಉತ್ತರ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ಈ ಬಗ್ಗೆ ಉನ್ನತ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ವಿಸ್ತೃತ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯನ್ನು ಪರಿಶೀಲಿಸಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14-01-2022 ಮತ್ತು 24-01-2022ರಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಗರಿಷ್ಠ 8/10 ಗಂಟೆಗಳ ಬದಲಾಗಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ ಗೌರವಧನವನ್ನು ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-
ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-
ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-
ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-

2021-22ನೇ ಶೈಕ್ಷಣಿಕ ಸಾಲಿನಿಂದ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗುತ್ತಿದೆ.

ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುತ್ತಿದೆ.

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023(ಇ), ದಿನಾಂಕ:31.10.2023 ರನ್ವಯ ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಗೆ ಬದಲಾಗಿ, ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ.

ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ನೇಮಕಾತಿ ಮಾಡಿಕೊಳ್ಳಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತವಾಗಿ ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ. ಆದ್ದರಿಂದ ತಾತ್ಕಾಲಿಕ ವ್ಯವಸ್ಥೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಎದುರಿಗೆ ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

**ಇಡಿ 38 ಡಿಸಿಇ 2024 (ಇ)**

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು